# Akashvani : Bangalore
# Regional Bulletin In Kannada
# 11.01.2026 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮೈಸೂರು ಚಾಮುಂಡಿಬೆಟ್ಟ ನಂದಿ ಮಾರ್ಗದ ರಸ್ತೆಯಲ್ಲಿ ಕಾಂಕ್ರೀಟ್ ತಡೆಗೋಡೆ ನಿರ್ಮಾಣಕ್ಕೆ ಸಚಿವ ಮಹದೇವಪ್ಪ ಸೂಚನೆ
- ಮನ್ರೇಗಾ ವಿಚಾರವಾಗಿ ವಿರೋಧ ಪಕ್ಷಗಳ ಜೊತೆ ಬಹಿರಂಗ ಚರ್ಚೆಗೆ ಸಿದ್ಧ - ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್
- ಬ್ರಹ್ಮಾವರ ಸರ್ಕಾರಿ ಡಿಪ್ಲೋಮಾ ಕೃಷಿ ಕಾಲೇಜು ಮೇಲ್ದರ್ಜೆಗೇರಿಸಲು ಸರ್ಕಾರ ನಿರ್ಧಾರ
- ದ್ವೇಷ ಭಾಷಣ ತಡೆ ಮಸೂದೆ ವಿರುದ್ಧ ನಾಳೆ ರಾಜ್ಯಪಾಲರಿಗೆ ದೂರು ನೀಡಲು ಬಿಜೆಪಿ ತೀರ್ಮಾನ
- ಮೂಡಬಿದಿರೆಯಲ್ಲಿ ನಾಳೆಯಿಂದ ೮೫ನೇ ಅಖಿಲ ಭಾರತ ಅಂತರ್ ವಿಶ್ವವಿದ್ಯಾನಿಲಯ ಅಥ್ಲೇಟಿಕ್ ಚಾಂಪಿಯನ್ ಶಿಪ್

*****************

ಮೈಸೂರಿನಲ್ಲಿ ಸುರಿದ ಮಳೆಯಿಂದಾಗಿ ಚಾಮುಂಡಿ ಬೆಟ್ಟದಲ್ಲಿ ನಂದಿಗೆ ಹೋಗುವ ಮಾರ್ಗದ ರಸ್ತೆಯಲ್ಲಿ ದೊಡ್ಡ ಬಿರುಕು ಬಿಟ್ಟಿದೆ. ಈ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರು ಇಂದು ಸ್ಥಳಕ್ಕೆ ಭೇಟಿ ನೀಡಿ ದುರಸ್ತಿ ಕಾಮಗಾರಿ ಪರಿಶೀಲಿಸಿದರು.

ಕಾಂಕ್ರೀಟ್ ತಡೆಗೋಡೆ ನಿರ್ಮಾಣ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದು, ತ್ವರಿತವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ಸೂಚನೆ ನೀಡಿದ್ದಾರೆ.

ನಂದಿ ವಿಗ್ರಹಕ್ಕೆ ತೆರಳುವ ಮಾರ್ಗವು ಕಿರಿದಾಗಿದ್ದು, ವಾಹನ ಚಲಾಯಿಸುವುದು ಅಸಾಧ್ಯವಾಗಿದೆ. ಈ ಹಿನ್ನೆಲೆಯಲ್ಲಿ ಗುಣಮಟ್ಟದ ರಸ್ತೆಯನ್ನು ಮರುನಿರ್ಮಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

*****************

ಮನ್ರೇಗಾ ವಿಚಾರವಾಗಿ ಬಹಿರಂಗ ಚರ್ಚೆ ಮಾಡುವ ವಿರೋಧ ಪಕ್ಷಗಳ ಪಂಥಾಹ್ವಾನವನ್ನು ಸ್ವೀಕರಿಸುವುದಾಗಿ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕುರಿತಂತೆ ಹೋರಾಟ ನಡೆಸಲು ಶೀಘ್ರವೇ ತೀರ್ಮಾನ ತೆಗೆದುಕೊಳ್ಳುವುದಾಗಿ ತಿಳಿಸಿದ್ದಾರೆ. ನರೇಗಾ ವಿಚಾರದಲ್ಲಿ ಚರ್ಚೆ ಮಾಡಲು ತಮಗೆ ಯಾವ ತಯಾರಿ ಬೇಕಾಗಿಲ್ಲ ಎಂದು ಹೇಳಿದ್ದಾರೆ.

ಇದೇ ವೇಳೆ ಕೇಂದ್ರ ಸಚಿವ ಕುಮಾರಸ್ವಾಮಿ ರಾಜ್ಯ ರಾಜಕಾರಣಕ್ಕೆ ಆಗಮಿಸುವ ಬಗ್ಗೆ ಪ್ರತಿಕ್ರಿಯಿಸಿ ಕುಮಾರಸ್ವಾಮಿಯವರು ಹಳ್ಳಿಯಿಂದಲೇ ರಾಜಕಾರಣ ಮಾಡಲಿ ಎಂದು ತಿಳಿಸಿದ್ದಾರೆ.

****************

ಬ್ರಹ್ಮಾವರ ಸರ್ಕಾರಿ ಡಿಪ್ಲೋಮಾ ಕೃಷಿ ಕಾಲೇಜನ್ನು ಮೇಲ್ದರ್ಜೆಗೇರಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ ತಿಳಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ಆಯೋಜಿಸಿರುವ ಮೈಸೂರು ವಿಭಾಗ ಮಟ್ಟದ ಕೃಷಿಮೇಳದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಬ್ರಹ್ಮಾವರ ಡಿಪ್ಲೋಮಾ ಕೃಷಿ ಕಾಲೇಜನ್ನು ಮೇಲ್ದರ್ಜೆಗೇರಿಸುವ ಮೂಲಕ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಕೃಷಿ ಶಿಕ್ಷಣ ಹಾಗೂ ಸಂಶೋಧನಾ ಅವಕಾಶಗಳು ದೊರೆಯಲಿವೆ ಎಂದು ಹೇಳಿದ್ದಾರೆ.

ವಿಧಾನ ಪರಿಷತ್ ಸದಸ್ಯ ಮಂಜುನಾಥ ಭಂಡಾರಿ ಬ್ರಹ್ಮಾವರ ಸರ್ಕಾರಿ ಕೃಷಿ ಕಾಲೇಜಿನ ಮೂಲಸೌಕರ್ಯ ಹಾಗೂ ಶೈಕ್ಷಣಿಕ ಪರಿಸ್ಥಿತಿಗಳ ಬಗ್ಗೆ ಸಚಿವ ಎನ್.ಚೆಲುವರಾಯಸ್ವಾಮಿ ಅವರ ಗಮನಕ್ಕೆ ತಂದಿದ್ದು, ಇದೀಗ ಸಚಿವರು ಸಕಾರಾತ್ಮಕ ಸ್ಪಂದನೆ ನೀಡಿದ್ದಾರೆ.

****************

ದ್ವೇಷ ಭಾಷಣ ತಡೆ ಮಸೂದೆ ವಿರುದ್ಧ ನಾಳೆ ರಾಜ್ಯಪಾಲರಿಗೆ ದೂರು ನೀಡಲು ಬಿಜೆಪಿ ನಿರ್ಧರಿಸಿದೆ. ಪ್ರತಿಪಕ್ಷನಾಯಕ ಆರ್ ಅಶೋಕ ಬೆಂಗಳೂರಿನಲ್ಲಿ ಈ ವಿಷಯ ತಿಳಿಸಿದ್ದಾರೆ.

ಮಸೂದೆ ಬಗ್ಗೆ ಚರ್ಚೆಗೆ ಸರ್ಕಾರ ಅವಕಾಶ ನೀಡಬೇಕಿತ್ತು. ಆದರೆ, ಏಕಾಏಕಿ ಮಸೂದೆ ಪಾಸ್ ಮಾಡಲಾಗಿದೆ. ಈಗ ಅದು ರಾಜ್ಯಪಾಲರ ಬಳಿ ಹೋಗಿದೆ. ಈ ಹಿನ್ನೆಲೆಯಲ್ಲಿ ನಾಳೆ ರಾಜ್ಯಾಧ್ಯಕ್ಷರು ಹಾಗೂ ಇತರ ಮುಖಂಡರು ರಾಜ್ಯಪಾಲರ ಬಳಿ ತೆರಳಿ ಈ ಬಗ್ಗೆ ಮನವರಿಕೆ ಮಾಡಿಕೊಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

****************

ಕಲಬುರಗಿಯಲ್ಲಿಂದು ಕೃಷಿ ಉತ್ಪನ್ನಗಳನ್ನು ರಾಶಿ ಮಾಡುವ ಉನ್ನತೀಕರಿಸಿದ ಯಂತ್ರಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಲೋಕಾರ್ಪಣೆಗೊಳಿಸಿದರು.

ಡಾ.ಎಸ್.ಎಂ.ಪಂಡಿತ ರಂಗ ಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ೧೧ ಯಂತ್ರಗಳನ್ನು ರೈತರ ಅನುಕೂಲಕ್ಕಾಗಿ ಲೋಕಾರ್ಪಣೆ ಗೊಳಿಸಿದರು. ಜಿಲ್ಲೆಯ ಎಫ್.ಪಿ.ಓ ಕೇಂದ್ರದ ಮೂಲಕ ಈ ಎಲ್ಲಾ ಯಂತ್ರಗಳನ್ನು ರೈತರು ಬಾಡಿಗೆ ಮೂಲಕ ಪಡೆಯಬಹುದಾಗಿದೆ. ಇದಕ್ಕಾಗಿ ಸರ್ಕಾರ ೫ ಕೋಟಿ ೫೦ ಲಕ್ಷ ರೂಪಾಯಿ ವ್ಯಯಿಸಿದೆ ಎಂದು ಅವರು ತಿಳಿಸಿದ್ದಾರೆ.

ಇದೇ ಸಂದರ್ಭದಲ್ಲಿ ಕೃಷಿಯಲ್ಲಿ ಸ್ವಯಂ ಉದ್ಯೋಗದ ಮೂಲಕ ಆದಾಯ ಗಳಿಸಲು ೨೦೨೪-೨೫ನೇ ಸಾಲಿನ ಜಿಲ್ಲಾ ಖನಿಜ ಪ್ರತಿಷ್ಠಾನ ಯೋಜನೆ ಅಡಿಯಲ್ಲಿ ತಲಾ ೫ ಲಕ್ಷ ರೂಪಾಯಿ ವೆಚ್ಚದಲ್ಲಿ ವಿಕಲಚೇತನರಿಗೆ ಕೃಷಿ ಯಂತ್ರೋಪಕರಣಗಳಾದ ರಾಶಿಮೆಷಿನ್ ರೋಟವೇಟರ ಯಂತ್ರೋಪಕರಣಗಳನ್ನು ವಿತರಿಸಿದರು.

*****************

ಸಾವಯವ ಕೃಷಿ ಇಂದಿನ ಅವಶ್ಯಕತೆಯೂ ಹೌದು ಎಂದು 'ಭಾರತದ ಗ್ರೀನ್ ಹೀರೋ' ಎಂದೇ ಖ್ಯಾತರಾಗಿರುವ ಆರ್.ಕೆ. ನಾಯರ್ ಅಭಿಪ್ರಾಯಪಟ್ಟಿದ್ದಾರೆ.

ಸಾವಯವ ಕೃಷಿಕ ಗ್ರಾಹಕ ಬಳಗದ ವತಿಯಿಂದ ಮಂಗಳೂರಿನಲ್ಲಿಂದು ಆಯೋಜಿಸಿದ್ದ 'ವ್ಯಸ್ತ ಜೀವನ - ಸ್ವಸ್ಥ ಭೋಜನ' ಆರೋಗ್ಯಕ್ಕಾಗಿ ಪಾರಂಪರಿಕ ಆಹಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಇಂದು ನಾವು ಪ್ರಕೃತಿಗೆ ಏನು ಕೊಡುತ್ತಿದ್ದೇವೆಯೋ ಅದೇ ನಮಗೆ ವಾಪಾಸು ಸಿಗುತ್ತಿದೆ. ಪ್ರಕೃತಿಯ ಮಡಿಲಿಗೆ ನಾವು ವಿಷವನ್ನು ಹಾಕಿದ ಪರಿಣಾಮ, ನಾವು ತಿನ್ನುವ ಆಹಾರ, ಕುಡಿಯುವ ನೀರು, ಇರುವ ಮಣ್ಣು, ಸೇವಿಸುವ ಗಾಳಿ ಎಲ್ಲವೂ ವಿಷಪೂರಿತವಾಗಿದೆ. ನಾವು ಬದಲಾದರೆ ಮಾತ್ರ ಈ ವ್ಯವಸ್ಥೆ ಬದಲಾಗಬಹುದು. ಗ್ರಾಮ, ರಾಜ್ಯ, ದೇಶ ಬದಲಾಗಬಹುದು ಎಂದು ತಿಳಿಸಿದ್ದಾರೆ.

ಮಕ್ಕಳಲ್ಲಿ ರೋಗ ನಿರೋಧಕ ಶಕ್ತಿ ಕಡಿಮೆಯಾಗುತ್ತಿರುವುದು ಆತಂಕಕಾರಿಯಾಗಿದ್ದು, ಸಾವಯವ ಕೃಷಿ, ಆಹಾರದ ಅಗತ್ಯತೆ ಬಗ್ಗೆ ಮಕ್ಕಳಿಗೆ ತಿಳಿಹೇಳಬೇಕಿದೆ ಎಂದು ಹೇಳಿದ್ದಾರೆ.

*****************

ಜರ್ಮನಿಯ ಫೆಡರಲ್ ಚಾನ್ಸೆಲರ್ ಫ್ರೆಡ್ರಿಕ್ ಮೆರ್ಜ್ ಎರಡು ದಿನಗಳ ಭಾರತ ಭೇಟಿಗಾಗಿ ನಾಳೆ ಆಗಮಿಸಲಿದ್ದಾರೆ.

ಅವರು ಮೊದಲ ಹಂತದಲ್ಲಿ ಗುಜರಾತ್‌ನ ಸಬರಮತಿ ಆಶ್ರಮಕ್ಕೆ ಭೇಟಿ ನೀಡಿ, ಗೌರವ ಸಮರ್ಪಣೆ ಮಾಡಲಿದ್ದಾರೆ.

ಮಂಗಳವಾರ ಚಾನ್ಸಲರ್ ಫೆಡ್ರಿಕ್ ಮೆರ್ಜ್, ಬೆಂಗಳೂರಿನ ಆಡುಗೋಡಿಯಲ್ಲಿರುವ ಭಾರತ-ಜರ್ಮನಿ ಸಹಯೋಗದ ಬಾಷ್ ಆವಿಷ್ಕಾರ ಮತ್ತು ತಯಾರಿಕಾ ಘಟಕಕ್ಕೆ ಭೇಟಿ ನೀಡಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

*****************

ಅಂತರರಾಷ್ಟ್ರೀಯ ಮಟ್ಟದಲ್ಲಿ ಕಲಬುರಗಿ ಪೊಲೀಸ್ ಕಮೀಷನರ್ ಕಚೇರಿಗೆ ಪ್ರಶಸ್ತಿ ಲಭಿಸಿದ್ದು ಹೆಮ್ಮೆಯ ಸಂಗತಿ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅಭಿಪ್ರಾಯಪಟ್ಟಿದ್ದಾರೆ.

ಸಾರ್ವಜನಿಕರ ಸೇವೆ, ನಾಗರಿಕ ಸ್ನೇಹಿ, ವೃತ್ತಿಪರತೆ ಸೇರಿದಂತೆ ಹಲವಾರು ವಿಭಾಗಗಳಲ್ಲಿ ಪೊಲೀಸ್ ಕಮೀಷನರೇಟ್ ಅಮೂಲಾಗ್ರ ಸುಧಾರಣೆ ಹೊಂದಿದೆ. ಎಲ್ಲಾ ಮಾನದಂಡಗಳನ್ನು ಪರಿಗಣಿಸಿ. ಅಂತರಾಷ್ಟ್ರೀಯ ಐಎಸ್ಒ ಪ್ರಶಸ್ತಿ ಲಭಿಸಿದೆ.

ಕಲಬುರಗಿಯಲ್ಲಿ ಅಪರಾಧ ಪ್ರಕರಣಗಳಲ್ಲಿ ಸಾಕಷ್ಟು ಇಳಿಮುಖವಾಗಿದೆ. ಮಾದಕ ವಸ್ತುಗಳ ವಿರುದ್ಧ ಪೊಲೀಸರು ಮತ್ತಷ್ಟು ಕಠಿಣ ಕ್ರಮ ಕೈಗೊಳ್ಳಬೇಕಾಗಿದೆ ಎಂದು ತಿಳಿಸಿದ್ದಾರೆ.

*****************

ಉಡುಪಿ ಕೃಷ್ಣನ ಊರಿನಲ್ಲಿ ಈಗ ಪರ್ಯಾಯ ಸಂಭ್ರಮ. ಇದೇ ೧೮ ರಂದು ಶಿರೂರು ಮಠದ ಪರ್ಯಾಯ ನಡೆಯಲಿದ್ದು, ಈಗಾಗಲೇ ಸಕಲ ಸಿದ್ಧತೆ ನಡೆಯುತ್ತಿದೆ.

ಶೀರೂರು ಮಠದ ಶ್ರೀವೇದವರ್ಧನ ತೀರ್ಥ ಸ್ವಾಮೀಜಿ ಪರ್ಯಾಯ ಮಹೋತ್ಸವದ ಪ್ರಯುಕ್ತ ಹೊರೆಕಾಣಿಕೆ ಸಮರ್ಪಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದಾರೆ.  ಪ್ರಥಮ ದಿನದ ಹೊರೆಕಾಣಿಕೆಯನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ಮತ್ತು ಒಕ್ಕೂಟ ಉಡುಪಿ ಜಿಲ್ಲೆ ವತಿಯಿಂದ ಸಮರ್ಪಿಸಲಾಯಿತು. ಇತರ ಧಾರ್ಮಿಕ ಕೇಂದ್ರಗಳಿಂದಲೂ ಹೊರೆಕಾಣಿಕೆ ಉಡುಪಿ ಪರ್ಯಾಯಕ್ಕೆ ಬರುತ್ತಿದೆ.

*****************

೮೫ನೇ ಅಖಿಲ ಭಾರತ ಪುರುಷ ಹಾಗೂ ಮಹಿಳೆಯರ ವಿಭಾಗದ ಅಂತರ್ ವಿಶ್ವವಿದ್ಯಾಲಯ ಅಥ್ಲೆಟಿಕ್ ಚಾಂಪಿಯನ್‌ಶಿಪ್  ನಾಳೆಯಿಂದ ಇದೇ ೧೬ರವರೆಗೆ ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದಿರೆಯ ಸ್ವರಾಜ್ಯ ಮೈದಾನದಲ್ಲಿ ಆಯೋಜಿಸಲಾಗಿದೆ ಎಂದು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ.ಎಂ. ಮೋಹನ ಆಳ್ವ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಆಶ್ರಯದಲ್ಲಿ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಸಹಯೋಗದಲ್ಲಿ ಈ ಸ್ಪರ್ಧಾಕೂಟ ನಡೆಯಲಿದೆ.

ನಾಳೆ ಸಂಜೆ ೫ಗಂಟೆಗೆ ವಿಧಾನಸಭಾ ಅಧ್ಯಕ್ಷ ಯು.ಟಿ ಖಾದರ್ ಕ್ರೀಡಾಕೂಟಕ್ಕೆ ಚಾಲನೆ ನೀಡಲಿದ್ದಾರೆ.

ದೇಶದ ೩೧೨ಕ್ಕೂ ಅಧಿಕ ವಿಶ್ವವಿದ್ಯಾಲಯಗಳ ೪ ಸಾವಿರದ ೨೮೮ ಅಥ್ಲೀಟ್‌ಗಳು ಈ ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದಾರೆ. ಸಮಗ್ರ ಪ್ರಶಸ್ತಿ ವಿಜೇತ ತಂಡಕ್ಕೆ ೫೦,೦೦೦ ರೂಪಾಯಿ ನಗದು, ರನ್ನರ್ ಅಪ್ ತಂಡಕ್ಕೆ ೩೦, ಸಾವಿರ ರೂಪಾಯಿ, ತೃತೀಯಯ ಸ್ಥಾನ ಪಡೆದವರಿಗೆ ೨೦ ಸಾವಿರ ರೂಪಾಯಿ ನಗದು ಹಾಗೂ ಕೂಟ ದಾಖಲೆ ನಿರ್ಮಿಸಿದವರಿಗೆ ೨೫ ಸಾವಿg ರೂಪಾಯಿ ನಗದು ಪುರಸ್ಕಾರ ನೀಡಲು ನಿರ್ಧರಿಸಲಾಗಿದೆ.

*****************

ಪುಟ್ಟ ಮಕ್ಕಳು ಮನೆಗಿಂತ ಹೆಚ್ಚಾಗಿ ಅಂಗನವಾಡಿಗಳಲ್ಲಿಯೇ ಪಾಲನೆಯಾಗುತ್ತಿರುವ ಈ ದಿನಗಳಲ್ಲಿ ಮಕ್ಕಳಿಗೆ ಸಂಸ್ಕಾರ ಕಲಿಸುವಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಪಾತ್ರ ಮಹತ್ವದ್ದು ಎಂದು ಮಡಿಕೇರಿ ನಗರಸಭೆಯ ಅಧ್ಯಕ್ಷೆ ಕಲಾವತಿ ತಿಳಿಸಿದ್ದಾರೆ.

ಮಕ್ಕಳಿಗೆ ಒಳ್ಳೆಯ ಶಿಕ್ಷಣ, ಸಂಸ್ಕಾರ, ಪ್ರೀತಿ, ಬುದ್ಧಿಯನ್ನು ಅಂಗನವಾಡಿಗಳಲ್ಲಿ ಕಾರ್ಯಕರ್ತೆಯರು ಕಲಿಸಬೇಕು. ಅಂಗನವಾಡಿ ಶಿಕ್ಷಕಿಯರು ಮಕ್ಕಳ ಪಾಲಿಗೆ ದೇವರ ಸಮಾನವಾಗಿದ್ದು ಬಾಲ್ಯದಲ್ಲಿ ಮಕ್ಕಳನ್ನು ಹೆಚ್ಚಿನ ಮಮತೆಯಿಂದ ಬಾಲ್ಯದಲ್ಲಿ ಬೆಳೆಸಬೇಕೆಂದು ಕಿವಿ ಮಾತು ಹೇಳಿದ್ದಾರೆ.

*****************

ಬಳ್ಳಾರಿಯ ಜಿಲ್ಲಾ ಪಂಚಾಯತ್‌ನ ಸಭಾಂಗಣದಲ್ಲಿ. ವಿಕಸಿತ ಭಾರತ ಜಿ ರಾಮ್ ಜಿ, ವಂದೇ ಮಾತರಂ ರಾಷ್ಟ್ರೀಯ ಗೀತೆಯ ೧೫೦ನೇ ವರ್ಷಾಚರಣೆ, ಬಾಲ್ಯವಿವಾಹ ಮುಕ್ತ ಭಾರತ ಅಭಿಯಾನ ಮತ್ತು ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತ ಛಾಯಾಚಿತ್ರ ಪ್ರದರ್ಶನ ಮತ್ತು ಜಾಗೃತಿ ಕಾರ್ಯಕ್ರಮದ ಸಮಾರಂಭ ನಡೆಯಿತು.

********ಮುಕ್ತಾಯ*******